ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 27ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ

2. ಚುನಾವಣಾ ಪ್ರಸ್ತಾವ

ಶ್ರೀ ಜೆ.ಸಿ. ಮಾಧುಸ್ವಾಮಿ, (ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) **ಅವರು:-**

2021-22ನೇ ಸಾಲಿನ ವಿಧಾನಮಂಡಲದ ವಿವಿಧ ಜಂಟಿ ಸಮಿತಿಗಳು ಮತ್ತು ವಿಧಾನಸಭೆಯ ವಿವಿಧ ಸಮಿತಿಗಳ ಅಧಿಕಾರಾವಧಿಯು ದಿನಾಂಕ:26ನೇ ಡಿಸೆಂಬರ್ 2022 ರಂದು ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ ಸದರಿ ಸಮಿತಿಗಳನ್ನು ಪುನರ್ ರಚನೆ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರ ನೀಡಬೇಕೆಂಬ ಪ್ರಸ್ತಾವವನ್ನು ಮಂಡಿಸುವುದು.

3. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-

ಅ) 2022ನೇ ಸಾಲಿನ ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಶ್ರೀ ಮುರುಗೇಶ ರುದ್ರಪ್ಪ ನಿರಾಣಿ (ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಅವರು:-

ಅ) 2022ನೇ ಸಾಲಿನ ಕರ್ನಾಟಕ ವಿಶೇಷ ಹೂಡಿಕೆ ಪ್ರದೇಶ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

.. 2/ ..

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇಧಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀ ಹೆಚ್. ಹಾಲಪ್ಪ ಹರತಾಳು ಮತ್ತು ಶ್ರೀ ದಿನಕರ ಕೇಶವ ಶೆಟ್ಟಿ ಇವರುಗಳು** – ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ ಅಧಿನಿಯಮ ಮತ್ತು ನಿಯಮಗಳನ್ನು ಸರಳೀಕರಿಸಿ, ಅರಣ್ಯ ಭೂ ಮಂಜೂರಾತಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಎಂ.ವಿ. ವೀರಭದ್ರಯ್ಯ, ರವೀಂದ್ರ ಶ್ರೀಕಂಠಯ್ಯ ಹಾಗೂ ಇತರರು** – ಹಾಸನ ತಾಲ್ಲೂಕು ಕಸಬಾ ಹೋಬಳಿಯ ವಿವಿಧ ಗ್ರಾಮಗಳಲ್ಲಿನ ಕೆಲವು ಜಮೀನುಗಳಿಗೆ ಸರಿಯಾದ ದಾಖಲಾತಿಗಳು ಇಲ್ಲದಿದ್ದರೂ ಸರ್ವೆ ಮಾಡಿಸದೇ, ಜಮೀನುಗಳ ದುರಸ್ತಿ ಮಾಡಿಸದೇ ಅನ್ಯಸಂಕ್ರಮಣ ಮಾಡಿಸದೇ ಟೌನ್ ಪ್ಲಾನಿಂಗ್ ಅನುಮೋದನೆ ಹಾಗೂ ಸಂಬಂಧಪಟ್ಟ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆಯದೇ ಭೂಮಾಫೀಯಾದವರು ಕಾನೂನುಬಾಹಿರವಾಗಿ ಬಡಾವಣೆಗಳನ್ನು ರಚಿಸಿ ನಿವೇಶನಗಳನ್ನು ಮಾರಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಹಾಗೂ ಪ್ರಿಯಾಂಕ ಖರ್ಗೆ ಇವರುಗಳು** – ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ರೀತಿಯ ಕಾಮಗಾರಿಗಳು ಹಾಗೂ ವಿವಿಧ ಇಲಾಖೆಗಳಲ್ಲಿನ ನೇಮಕಾತಿ, ಬಡ್ತಿ, ವರ್ಗಾವಣೆ, ಖರೀದಿ, ಮಾರಾಟದಲ್ಲಿ ಭ್ರಷ್ಟಾಚಾರ ಮತ್ತು ಕಳಪೆ ಗೊಬ್ಬರ, ರಾಸಾಯನಿಕಗಳು, ಬಿತ್ತನೆ ಬೀಜಗಳ ಮಾರಾಟ ಇವುಗಳನ್ನು ನಿಯಂತ್ರಿಸುವಲ್ಲಿ ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

ಹಾಗೂ

ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಎ.ಟಿ. ರಾಮಸ್ವಾಮಿ, ಎಂ. ಕೃಷ್ಣಾರೆಡ್ಡಿ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು – ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿರುವ ರೈತರುಗಳಿಗೆ ಒದಗಿಸುವ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ನೀಡಿರುವ ಸಬ್ಸಿಡಿ ಸೌಲಭ್ಯವನ್ನು ಪಡೆಯುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಕೃಷ್ಣ ಬೈರೇಗೌಡ, ಎ.ಟಿ. ರಾಮಸ್ವಾಮಿ ಹಾಗೂ ಶ್ರೀಮತಿ ಸೌಮ್ಯ ರೆಡ್ಡಿ ಇವರುಗಳು –** ಬೆಂಗಳೂರಿನಲ್ಲಿರುವ ಟರ್ಫ್ ಮತ್ತು ಗಾಲ್ಫ್ ಕ್ಲಬ್‌ಗಳು ಬಾಕಿ ಇರುವ ಕೋಟ್ಯಾಂತರ ರೂಪಾಯಿಗಳ ಬಾಡಿಗೆಯನ್ನು ಪಾವತಿಸದೇ ರಾಜ್ಯದ ಬೊಕ್ಕಸಕ್ಕೆ ಮಾಡಿರುವ ನಷ್ಟದ ಬಗ್ಗೆ ಹಾಗೂ ಗುತ್ತಿಗೆ ಅವಧಿ ಮುಗಿದಿರುವ ಸದರಿ ಖಾಸಗಿ ಕ್ಲಬ್‌ಗಳನ್ನು ಬೆಂಗಳೂರಿನ ಹೊರಭಾಗಕ್ಕೆ ಸ್ಥಳಾಂತರಿಸಿ, ಸದರಿ ಪ್ರದೇಶಗಳಲ್ಲಿ ಉದ್ಯಾನವನ, ಆಟದ ಮೈದಾನಗಳನ್ನು ನಿರ್ಮಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ.ಎಸ್. ಈಶ್ವರಪ್ಪ ಅವರು –** ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ಆಗಿರುವ ಲೋಪದೋಷಗಳು ಹಾಗೂ ಅವ್ಯವಹಾರಗಳ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

2) **ಶ್ರೀ ಅಭಯ ಪಾಟೀಲ ಅವರು –** ಬೆಳಗಾವಿಯಲ್ಲಿರುವ ಸುವರ್ಣಸೌಧ ಮುಂಭಾಗದ ಪ್ರದೇಶದಲ್ಲಿ ಛತ್ರಪತಿ ಶ್ರೀ ಶಿವಾಜಿ ಮಹಾರಾಜರು, ವೀರಮದಕರಿ ನಾಯಕ, ಡಾ: ಬಿ.ಆರ್. ಅಂಬೇಡ್ಕರ್ ಇವರುಗಳ ಪುತ್ಥಳಿಗಳನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ವೆಂಕಟರಾವ್ ನಾಡಗೌಡ ಅವರು –** ಸಿಂಧನೂರು ತಾಲ್ಲೂಕಿನಲ್ಲಿ ಟಿ.ಎ.ಪಿ.ಎಂ.ಸಿ.ಎಸ್. ಅಧೀನದಲ್ಲಿರುವ 5 ಎಕರೆ ಜಮೀನನ್ನು ನಿಯಮ ಬಾಹಿರವಾಗಿ ಲೀಸ್ ಕಂ ಸೇಲ್ ಆಧಾರದಲ್ಲಿ ಖಾಸಗಿ ಸಂಸ್ಥೆಗೆ ನೀಡಿರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಬಗ್ಗೆ ಹಾಗೂ ಸದರಿ ಜಮೀನನ್ನು ಸಹಕಾರ ಇಲಾಖೆಯ ವಶಕ್ಕೆ ಪಡೆಯುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

4) **ಶ್ರೀ ಹೆಚ್.ಕೆ. ಪಾಟೀಲ ಅವರು –** ಗದಗ–ಬೆಟಗೇರಿ ಅವಳಿ ನಗರಗಳಿಗೆ ನಿರಂತರ ನೀರು ಪೂರೈಸಲು ಎ.ಡಿ.ಬಿ. ಅನುದಾನದ ಎನ್.ಕೆ.ಯು.ಎಸ್.ಎಲ್.ಪಿ. ಯೋಜನೆಯನ್ನು ಜಾರಿಗೊಳಿಸಲು ವಿಳಂಬವಾಗುತ್ತಿರುವುದರಿಂದ ನಾಗರಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು –** ಬಾಗೇಪಲ್ಲಿ ತಾಲ್ಲೂಕಿನ ಹೊಸಹುಡ್ಯ ಗ್ರಾಮದಲ್ಲಿ ನಕಲಿ ದಾಖಲಾತಿಯನ್ನು ಸೃಷ್ಟಿಸಿ ಭೂ ಕಬಳಿಕೆ ಮಾಡಿರುವ ಜಮೀನನ್ನು ವಶಕ್ಕೆ ಪಡೆಯಲು ಚಿಕ್ಕಬಳ್ಳಾಪುರ ಉಪ ವಿಭಾಗದ ಅಧಿಕಾರಿಗಳು ವಿಫಲವಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಶ್ರೀಮಂತ ಬಾಳಾ ಸಾಹೇಬ ಪಾಟೀಲ್ ಅವರು –** ಕಾಗವಾಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ವಿವಿಧ ವಿದ್ಯುತ್ ಉಪವಿಭಾಗ ಕೇಂದ್ರಗಳಲ್ಲಿ ಸಾಮೂಹಿಕ ಏತ ನೀರಾವರಿ ಹಾಗೂ ರೈತರ ಮೋಟರ್ ಪಂಪ್‌ಗಳಿಗೆ 3 ಫೇಸ್ ವಿದ್ಯುತ್ ಅನ್ನು 7 ಗಂಟೆಗಳ ಕಾಲ ಪೂರೈಕೆ ಮಾಡಬೇಕಾಗಿದ್ದರೂ ಸಹ ಕೇವಲ 3 ಗಂಟೆಗಳ ಕಾಲ ಮಾತ್ರ ಪೂರೈಕೆ ಮಾಡುತ್ತಿರುವುದರಿಂದ ಹಾಗೂ ರಾತ್ರಿಯ ವೇಳೆಯಲ್ಲಿ ನೀಡುತ್ತಿದ್ದ ಒಪನ್ ಡೆಲ್ಟ್ (ಸಿಂಗಲ್ ಫೇಸ್) ರದ್ದುಪಡಿಸಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ ಅವರು** – ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಕಾಫಿ ಬೆಳೆಗಾರರ 10 ಹೆಚ್.ಪಿ. ಒಳಗಿನ ಮೋಟರ್‌ಗಳಿಗೆ ಉಚಿತ ವಿದ್ಯುತ್ ನೀಡಲು ಹಾಗೂ ವಿದ್ಯುತ್ ಬಿಲ್ ಬಾಕಿ ಹಣವನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಜೆ. ಜಾರ್ಜ್ ಅವರು** – ಸರ್ವಜ್ಞ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೆ.ಆರ್. ಪುರಂ ಹೋಬಳಿ ಬಾಣಸವಾಡಿ ಗ್ರಾಮದಲ್ಲಿರುವ ಕೆರೆಯ ಜಾಗಕ್ಕೆ ಸಂಬಂಧಿಸಿದಂತೆ ನಕಲಿ ಭೂ ದಾಖಲೆಗಳನ್ನು ಸೃಷ್ಟಿಸಿರುವ ಬಗ್ಗೆ ಸೂಕ್ತ ವಾದವನ್ನು ಮಂಡಿಸದೇ ಇರುವುದರಿಂದ ಕೋಟ್ಯಾಂತರ ರೂಪಾಯಿ ಬೆಲೆಬಾಳುವ ಜಾಗವು ಭೂ ಕಬಳಿಕೆದಾರರ ಪಾಲಾಗುತ್ತಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

9) **ಶ್ರೀ ಎಂ.ವಿ. ವೀರಭದ್ರಯ್ಯ ಅವರು** – ರಾಜ್ಯದಲ್ಲಿ ಮುಖ್ಯ ಪುಸ್ತಕ ಬರಹಗಾರರು ಹಾಗೂ ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳ ಗೌರವಧನವನ್ನು ಹೆಚ್ಚಿಸಿ, ಸಾಮಾಜಿಕ ಭದ್ರತೆಯನ್ನು ಒದಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೈಲಹೊಂಗಲ ಮತ್ತು ಕಿತ್ತೂರು ತಾಲ್ಲೂಕಿನ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರುಗಳಿಗೆ ಸಾರಿಗೆ ಸೌಲಭ್ಯದ ಸಮಸ್ಯೆ ಉಂಟಾಗುತ್ತಿರುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಸಿದ್ದು ಸವದಿ ಅವರು – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7. ವಿಶೇಷ ಚರ್ಚೆ

1) ರಾಜ್ಯದಲ್ಲಿ ಕಾಡುಪ್ರಾಣಿಗಳ ಹಾವಳಿ ಕುರಿತು ವಿಶೇಷ ಚರ್ಚೆ
2) ರಾಜ್ಯದಲ್ಲಿ ಹೊಸ ಪಿಂಚಣಿ ಯೋಜನೆಯನ್ನು (ಎನ್‌ಪಿಎಸ್) ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ವಿಶೇಷ ಚರ್ಚೆ

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm